# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 359 |
| **ಮಾನ್ಯ ಸದಸ್ಯರ ಹೆಸರು** | : | ಶ್ರೀ ಬಸನಗೌಡ ಬಾದರ್ಲಿ<br>(ವಿಧಾನಸಭೆಯಿಂದ ಚುನಾಯಿತರಾದವರು) |
| **ಉತ್ತರಿಸುವ ದಿನಾಂಕ** | : | 29-01-2026 |
| **ಉತ್ತರಿಸುವ ಸಚಿವರು** | : | ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಯ ಸಿಂಧನೂರ ತಾಲ್ಲೂಕಿನ ಸುಪ್ರಸಿದ್ಧ ಅಂಬಾದೇವಿಯ ಅಂಬಾಮಠ ದೇವಸ್ಥಾನವು ಪುರಾತನ ದೇವಾಲಯವಾಗಿದ್ದು, ಲಕ್ಷಾಂತರ ಭಕ್ತರ ಧಾರ್ಮಿಕ ಕ್ಷೇತ್ರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ. |
| ಆ) | ಸದರಿ ಧಾರ್ಮಿಕ ಸ್ಥಳಕ್ಕೆ ಆಗಿಂದಾಗ್ಗೆ ಸುತ್ತಮುತ್ತಲಿನ ಪ್ರದೇಶಗಳಿಂದ ಹಾಗೂ ನೆರೆಯ ರಾಜ್ಯಗಳಿಂದ ಭಕ್ತಾದಿಗಳು ಆಗಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಇ) | ಬಂದಿದ್ದಲ್ಲಿ, ಸದರಿ ಸ್ಥಳವನ್ನು ಪ್ರಸಿದ್ಧ ಪ್ರವಾಸಿ ತಾಣವಾಗಿ ಅಭಿವೃದ್ಧಿಪಡಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; | ಸರ್ಕಾರದ ಆದೇಶ ಸಂಖ್ಯೆ: ಟಿಓಆರ್ 194 ಟಿಡಿಪಿ 2025, ದಿನಾಂಕ:07.08.2025ರಲ್ಲಿ ಕರ್ನಾಟಕ ಪ್ರವಾಸೋದ್ಯಮ ನೀತಿ 2024-29ರಡಿ ರಾಯಚೂರು ಜಿಲ್ಲೆಯಲ್ಲಿ ಸಿಂಧನೂರು ತಾಲ್ಲೂಕಿನ ಅಂಬಾಮಠವನ್ನು ಪ್ರವಾಸಿ ತಾಣವನ್ನಾಗಿ ಗುರುತಿಸಲಾಗಿದೆ.<br><br>2017-18ನೇ ಸಾಲಿನಲ್ಲಿ ಮಂಜೂರಾದ ರಾಯಚೂರು ಜಿಲ್ಲೆಯ ಸಿಂಧನೂರು ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಅಂಬಾಮಠದ ಬಳಿ ರೂ.25.00 ಲಕ್ಷಗಳ ಅಂದಾಜು ವೆಚ್ಚದ ಯಾತ್ರಿನಿವಾಸ ನಿರ್ಮಾಣ ಕಾಮಗಾರಿಗೆ ಈಗಾಗಲೇ ರೂ.25.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಕಾಮಗಾರಿ ಪೂರ್ಣಗೊಂಡಿರುತ್ತದೆ.<br><br>ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ, ರಾಯಚೂರು ಜಿಲ್ಲೆ ಇವರ ಶಿಫಾರಸ್ಸಿನಂತೆ ಕೇಂದ್ರ ಸರ್ಕಾರದ PRASHAD 2.0 ಯೋಜನೆಯಡಿ ರಾಯಚೂರು ಜಿಲ್ಲೆ, ಸಿಂಧನೂರು ತಾಲ್ಲೂಕಿನ ಅಂಬಾದೇವಿ ದೇವಸ್ಥಾನದ ಅಭಿವೃದ್ಧಿ ಕಾಮಗಾರಿಗಳನ್ನು ರೂ.15,000.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯದ ಅನುಮೋದನೆ ನೀಡುವಂತೆ ಕೋರಿ ದಿನಾಂಕ:07.11.2025ರಂದು ಪ್ರಸ್ತಾವನೆ ಸಲ್ಲಿಸಿದೆ. ಅನುಮೋದನೆ ನಿರೀಕ್ಷಿಸಲಾಗುತ್ತಿದೆ. |
| ಈ) | ಇದ್ದಲ್ಲಿ, ಯಾವ ಹಂತದಲ್ಲಿದೆ ಹಾಗೂ ಯಾವ ಕಾಲಮಿತಿಯೊಳಗೆ ಸದರಿ ಸ್ಥಳವನ್ನು ಪ್ರಸಿದ್ಧ ತಾಣವಾಗಿ ಘೋಷಿಸಲಾಗುತ್ತದೆ? | |

**TOR 24 TDV 2026**

**(ಎಚ್.ಕೆ. ಪಾಟೀಲ)**
ಕಾನೂನು, ನ್ಯಾಯ, ಮಾನವ ಹಕ್ಕುಗಳು,
ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು.